File No.AGRI-AMS/68/2019-AGRI_PLAN_B-AGRICULTURE Secretariat

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2019-20ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಯೋಜನೆಯಡಿ ಎಣ್ಣೆ ಕಾಳು ಮತ್ತು ತಾಳೆ ಬೆಳೆ ಯೋಜನೆಯ ಅನುಷ್ಠಾನಕ್ಕಾಗಿ ಆಡಳಿತಾತ್ಮಕ ಮಂಜೂರಾತಿ ಮತ್ತು ಮೊದಲನೇ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಕೃಇ 41 ಕೃಯೋಕಾ 2019, ದಿನಾಂಕ:02.04.2019.
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 4-1/2019-20/NFSM-OS&OP/ CNo.68167, ದಿ:26.06.2019.
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 14-1/2019-CA-II, ದಿನಾಂಕ:25.09.2019.
4. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 20 BGL 2019, ದಿನಾಂಕ:04.10.2019.
5. ಕೃಷಿ ಆಯುಕ್ತರ ಪತ್ರ ಸಂ: ಉಕೃನಿ/NFSM-oil seeds-ಅಬಿ/2019-20, ದಿನಾಂಕ: 09.10.2019.

ಪ್ರಸ್ತಾವನೆ:

2019-20ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (NFSM) ಯೋಜನೆಯಡಿ ಲೆಕ್ಕ ಶೀರ್ಷಿಕೆ: 2401-00-102-0-08 ರಡಿ ಒಟ್ಟು ರೂ. 17477.00 ಲಕ್ಷ ಅನುದಾನ ನಿಗದಿಪಡಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಯೋಜನೆಯನ್ನು 2019-20ನೇ ಸಾಲಿನಲ್ಲಿಯೂ ಮುಂದುವರೆಸಿ ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (2)ರ ಕೇಂದ್ರ ಸರ್ಕಾರದ ಪತ್ರದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು ಮತ್ತು ತಾಳೆ ಬೆಳೆ) ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಶೇ 60:40 ರ ಹಂಚಿಕೆ ವಿನ್ಯಾಸದಲ್ಲಿ 2019-20ನೇ ಸಾಲಿನಲ್ಲಿ ಒಟ್ಟಾರೆ ರೂ.2346.51 ಲಕ್ಷಗಳ ವಾರ್ಷಿಕ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿರುತ್ತದೆ. ಸದರಿ ಕ್ರಿಯಾ ಯೋಜನೆಯಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು) ಯೋಜನೆಗೆ 2019-20ನೇ ಸಾಲಿನ ರೂ.571.27 ಲಕ್ಷಗಳು ಹಾಗೂ 2018-19ನೇ ಸಾಲಿನ ಬದ್ಧ ವೆಚ್ಚ ರೂ.98.73 ಲಕ್ಷ ರೂಗಳು ಸೇರಿಸಿ ಒಟ್ಟು ರೂ.670.00 ಲಕ್ಷಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆ.

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ 2019-20 ನೇ ಸಾಲಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು) ಯೋಜನೆಗೆ ಕೇಂದ್ರ ಸರ್ಕಾರದ ಪಾಲಿನ ಮೊದಲನೇ ಕಂತಿನ ಅನುದಾನವನ್ನಾಗಿ ರೂ.248.61 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮೇಲೆ ಓದಲಾದ (4)ರಲ್ಲಿ ಆರ್ಥಿಕ ಇಲಾಖೆಯು ಕೇಂದ್ರ ಸರ್ಕಾರದಿಂದ 2019-20ನೇ ಸಾಲಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು) ಯೋಜನೆಯಡಿ ಬಿಡುಗಡೆಯಾಗಿರುವ ಒಟ್ಟು ರೂ. 248.61 ಲಕ್ಷ ಅನುದಾನವು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಬಗ್ಗೆ ಜಮಾ ದೃಢೀಕರಣ ಪತ್ರವನ್ನು ನೀಡಿರುತ್ತದೆ.

ಮೇಲೆ ಓದಲಾದ (5)ರ ಕೃಷಿ ಆಯುಕ್ತರ ಪತ್ರದಲ್ಲಿ 2019-20ನೇ ಸಾಲಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು) ಕಾರ್ಯಕ್ರಮವನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರದ ಶೇ.60:40 ರ ಹಂಚಿಕೆ ಅನುಪಾತದಲ್ಲಿ ಅನುಷ್ಠಾನಗೊಳಿಸಲು ಅನುವಾಗುವಂತೆ ಪ್ರಸಕ್ತ ಸಾಲಿನ ಕ್ರಿಯಾ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿಯನ್ನು ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ರೂ. 248.61 ಲಕ್ಷಗಳ ಅನುದಾನಕ್ಕೆ ಪೂರಕವಾಗಿ ರಾಜ್ಯದ ಪಾಲಿನ ಅನುದಾನ ರೂ.165.74 ಲಕ್ಷಗಳನ್ನು ಸೇರಿಸಿ ಒಟ್ಟಾರೆ ರೂ. 414.35 ಲಕ್ಷಗಳನ್ನು 2019-20ನೇ ಸಾಲಿನಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ- ಲೆಕ್ಕ ಶೀರ್ಷಿಕೆ 2401-00-102-0-08 ರಡಿ ಒದಗಿಸಿರುವ ಅನುದಾನದಿಂದ ಬಿಡಗಡೆ ಮಾಡುವಂತೆ ಹಾಗೂ 2018-19ನೇ ಸಾಲಿನ ಬದ್ಧ ವೆಚ್ಚವನ್ನು ಸದರಿ ಅನುದಾನದಿಂದ ಭರಿಸಲು ಸಹ ಅನುಮತಿಯನ್ನು ನೀಡುವಂತೆ ಕೋರಲಾಗಿದೆ.

ಕೃಷಿ ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ; ಕೃಇ 68 ಕೃಉಇ 2019, ಬೆಂಗಳೂರು, ದಿನಾಂಕ:12.11.2019.**

2019-20 ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ: 2401-00-102-0-08 ಅಡಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ ಯೋಜನೆ (NFSM) ಅನುಷ್ಠಾನಕ್ಕೆ ಒದಗಿಸಲಾಗಿರುವ ಅನುದಾನದಲ್ಲಿ ಲೆಕ್ಕಶೀರ್ಷಿಕೆ ಘಟಕವಾರು ಲಭ್ಯವಿರುವ ಅನುದಾನದಿಂದ ರಾಷ್ಟ್ರೀಯ ಆಹಾರ ಭದ್ರತಾ ಅಭಿಯಾನ (ಎಣ್ಣೆ ಕಾಳು) ಕಾರ್ಯಕ್ರಮಕ್ಕೆ ಮೊದಲನೇ ಕಂತಿನ ಅನುದಾನ ರೂ.284.97 ಲಕ್ಷಗಳನ್ನು (ಎರಡು ನೂರ ಎಂಬತ್ತನಾಲ್ಕು ಲಕ್ಷದ ತೊಂಬತ್ತೇಳು ಸಾವಿರ ರೂಪಾಯಿಗಳು ಮಾತ್ರ) ಕೇಂದ್ರ ಹಾಗೂ ರಾಜ್ಯದ ಪಾಲು ಶೇ 60:40 ಅನುಪಾತದಲ್ಲಿ ಈ ಕೆಳಕಂಡಂತೆ ಘಟಕವಾರು ಹಾಗೂ ವರ್ಗವಾರು ಬಿಡುಗಡೆ ಮಾಡುತ್ತಾ ಸದರಿ ಕಾರ್ಯಕ್ರಮವನ್ನು ಪ್ರಸಕ್ತ ಸಾಲಿನ ಕ್ರಿಯಾ ಯೋಜನೆ ಅನ್ವಯ ಅನುಷ್ಠಾನಗೊಳಿಸಲು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

File No.AGRI-AMS/68/2019-AGRI_PLAN_B-AGRICULTURE Secretariat

(ರೂ. ಲಕ್ಷಗಳಲ್ಲಿ)

| ಕ್ರ ಸಂ. | ಯೋಜನೆ/ ಕಾರ್ಯಕ್ರಮ | ಲೆಕ್ಕ ಶೀರ್ಷಿಕೆ | ಉಪ ಶೀರ್ಷಿಕೆ | ಕೇಂದ್ರದ ಪಾಲು | ರಾಜ್ಯದ ಪಾಲು | ಒಟ್ಟು |
|---|---|---|---|---|---|---|
| 01 | NFSM – (ಎಣ್ಣೆ ಕಾಳು) | 2401–00–102–0–08 | 422–ವಿ.ಘ.ಯೋ | 42.51 | 28.340 | 70.85 |
| | | | 423– ಗಿ.ಉ.ಯೋ. | 17.40 | 11.600 | 29.00 |
| | | | 106–ಸಾಮಾನ್ಯ | 111.072 | 74.048 | 185.12 |
| | ಒಟ್ಟು | | | 170.982 | 113.988 | 284.97 |

ಸದರಿ ಅನುದಾನದಲ್ಲಿ 2018–19ನೇ ಸಾಲಿನ ಬದ್ಧ ವೆಚ್ಚವನ್ನು ಸಹ ಭರಿಸಲು ಅನುಮತಿಯನ್ನು ನೀಡಲಾಗಿದೆ.

ಕೃಷಿ ನಿರ್ದೇಶಕರು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್.ಡಿ/01/ಟಿಎಫ್‌ಪಿ/2019 ದಿ:03–04–2019 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದ ಮೇರೆಗೆ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಕೃಇ 56 ಆಂಆಸ 2019, ದಿನಾಂಕ:25.10.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

12/11

ಇವರಿಗೆ:–

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ),
   ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು–01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.

3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.

4.ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

6. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.

7. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.

9. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.

10.ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.

11. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು

12.ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು

13. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

*****